ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ಇವರು ನಿಯಮ-73ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:106ಕ್ಕೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಹೇಳಿಕೆ.

**ವಿಷಯ:-** "ಅಂಗನವಾಡಿಗಳ ನಿರ್ವಹಣೆ ಜತೆಗೆ ಚುನಾವಣಾ ಕೆಲಸಗಳು, ಗರ್ಭಿಣಿ, ಬಾಣಂತಿ, ಮಕ್ಕಳ ಆರೋಗ್ಯದ ಹೊಣೆ ಹೊತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಸಹಾಯಕಿಯರು ಕಳೆದ ಮೂರು ತಿಂಗಳಿಂದ ಸಂಬಳ ಇಲ್ಲದೆ ತೊಂದರೆಗೊಳಗಾಗಿರುವ ಬಗ್ಗೆ ದಿನಾಂಕ:02.12.2022ರ ವಿಜಯ ಕರ್ನಾಟಕ ಪತ್ರಿಕೆಯಲ್ಲಿ ವರದಿಯಾಗಿರುತ್ತದೆ. ಕಳೆದ 4 ತಿಂಗಳಿಂದ ತರಕಾರಿ, ಮೊಟ್ಟೆ, ಇನ್ನಿತರೆ ವಸ್ತುಗಳನ್ನು ಕೊಂಡುಕೊಳ್ಳುವ ಸಲುವಾಗಿ ಅಂಗನವಾಡಿಗೆ ಬರುತ್ತಿದ್ದ ಅನುದಾನವು ಸಹ ನಿಂತುಹೋಗಿರುತ್ತದೆ. ರಾಜ್ಯದಲ್ಲಿ ಸುಮಾರು 62,580 ಅಂಗನವಾಡಿಗಳು, 3,331 ಮಿನಿ ಅಂಗನವಾಡಿಗಳಿದ್ದು, ಒಟ್ಟು 58 ಲಕ್ಷ ಫಲಾನುಭವಿಗಳು ಸೌಲಭ್ಯ ಪಡೆಯುತ್ತಿದ್ದಾರೆ. ಪ್ರತಿ ಅಂಗನವಾಡಿ ಕಾರ್ಯಕರ್ತೆಗೆ 10 ಸಾವಿರ ರೂ. ಸಹಾಯಕಿಯರಿಗೆ 5250 ರೂ, ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ 6250 ರೂಗಳ ಗೌರವಧನವನ್ನು ಕೊಡಲಾಗುತ್ತಿದೆ. ಕಳೆದ ಮೂರು ತಿಂಗಳಿಂದ ಗೌರವಧನ ಪಾವತಿಯಾಗಿರುವುದಿಲ್ಲ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಗುತ್ತಿಗೆ ಸಿಬ್ಬಂದಿಗೂ ಮೂರು ತಿಂಗಳಿಂದ ವೇತನ ಪಾವತಿಯಾಗಿರುವುದಿಲ್ಲ. ಇದರ ಜತೆಗೆ ಅಂಗನವಾಡಿ ಮಕ್ಕಳಿಗೆ, ಗರ್ಭಿಣಿಯರಿಗೆ ನೀಡುವ ಮೊಟ್ಟೆ ಮತ್ತು ತರಕಾರಿಗೆಂದು ಪ್ರತಿ ತಾಲ್ಲೂಕಿಗೆ ಸರಾಸರಿ 10 ಲಕ್ಷ ರೂಗಳ ಅನುದಾನ ಲಭಿಸುತ್ತದೆ. ಕಳೆದ 4 ತಿಂಗಳಿಂದ ಈ ಅನುದಾನವೂ ಬಂದಿಲ್ಲ. ಮಕ್ಕಳಿಗೆ ಊಟ ಪೌಷ್ಠಿಕ ಆಹಾರ ನೀಡದಿದ್ದರೆ ಪೋಷಕರು ತಕರಾರು ಮಾಡುತ್ತಾರೆ. ಅದಕ್ಕಾಗಿ ಅಂಗನವಾಡಿ ಕಾರ್ಯಕರ್ತೆಯರು ತಮ್ಮ ಉಳಿತಾಯದ ಹಣ ಬಳಸಿಕೊಂಡು ಇಲ್ಲವೆ ಸಾಲ ಪಡೆದುಕೊಂಡು ತರಕಾರಿ ಮೊಟ್ಟೆಗಳನ್ನು ಖರೀದಿಸಿ, ಅಡುಗೆ ತಯಾರಿಸಿ ಉಣಬಡಿಸುತ್ತಿದ್ದಾರೆ. ಆದರೆ ತಿಂಗಳ ಗೌರವಧನ ಲಭಿಸದ ಕಾರಣ ಕೈಯಲ್ಲಿ ಹಣವಿಲ್ಲದೆ ಕುಟುಂಬದ ದೈನಂದಿನ ನಿರ್ವಹಣೆಗೂ ಸಂಕಷ್ಟ ಅನುಭವಿಸುವಂತಾಗಿದೆ. ಅಂಗನವಾಡಿ ಶಿಕ್ಷಕಿಯರು, ಸಹಾಯಕಿಯರು ಸೇರಿದಂತೆ ಇಲಾಖೆಯಲ್ಲಿ ಗುತ್ತಿಗೆ ಸಿಬ್ಬಂದಿಗೆ ವೇತನ ಪಾವತಿ ಆಗದಿರುವುದಕ್ಕೆ ತಾಂತ್ರಿಕ ಸಮಸ್ಯೆ ಕಾರಣ ಎಂದು ಹೇಳಲಾಗುತ್ತಿದೆ. ಈ ನೌಕರರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಸೇರಿ ಗೌರವಧನ ಪಾವತಿಸುತ್ತವೆ. ರಾಜ್ಯ ಮತ್ತು ಕೇಂದ್ರದ ಅನುದಾನ ಬೇರೆ ಬೇರೆ ಸಮಯದಲ್ಲಿ ಬರುತ್ತಿತ್ತು. ಇದರಿಂದ ಸಕಾಲಕ್ಕೆ ಗೌರವಧನ ಪಾವತಿ ಮಾಡುವಲ್ಲಿ ಸಮಸ್ಯೆಯಾಗುತ್ತಿತ್ತು. ಇಲಾಖೆಯಲ್ಲಿ ಈಗ ಹೊಸ ಸಾಫ್ಟ್‌ವೇರ್ ಅನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಹಾಗೂ ಬಿಲ್ಲಿಂಗ್ ಮಾಡುವುದಕ್ಕೆ ಸಿಬ್ಬಂದಿಗೆ ಸೂಕ್ತ ತರಬೇತಿ ಅಗತ್ಯವಿರುವುದರಿಂದ ಇನ್ನೂ ಒಂದು ತಿಂಗಳು ಈ ಸಮಸ್ಯೆಗೆ ಪರಿಹಾರ ಕಾಣುವ ಲಕ್ಷಣ ಕಾಣುತ್ತಿಲ್ಲವೆಂದು ತಿಳಿದು ಬಂದಿದೆ. ಕೆಲವು ದಿನಗಳಿಂದ ಹೆಚ್. ಆರ್. ಎಂ. ಎಸ್. ತಂತ್ರಾಂಶ ಲಾಕ್ ಆಗಿದ್ದು, ಇದು ಒಂದು ಸಮಸ್ಯೆಯಾಗಿ ಪರಿಣಮಿಸಿದೆ. ಇದರ ನಡುವೆ ಅಕ್ಟೋಬರ್ ತಿಂಗಳಲ್ಲಿ ಹಳೆ ಪದ್ಧತಿ ಮೂಲಕವೇ ಗೌರವಧನ ಮತ್ತು ಅನುದಾನ ಪಾವತಿಯಾಗಿತ್ತು. ಇವೆಲ್ಲ ಸಮಸ್ಯೆಗಳು ಬಗೆಹರಿಯುವವರೆಗೆ ಹಳೆಯ ಪದ್ಧತಿಯಲ್ಲಿ ಗೌರವಧನ ಮತ್ತು ಅನುದಾನವನ್ನು ಪಾವತಿಸಬೇಕು ಎಂದು ಅಂಗನವಾಡಿ ಕಾರ್ಯಕರ್ತೆಯರು, ಸಿಬ್ಬಂದಿ ವರ್ಗದವರ ಬೇಡಿಕೆಯಾಗಿರುತ್ತದೆ. ಈ ಎಲ್ಲಾ ಸಮಸ್ಯೆಗೆ ಪರಿಹಾರ ಕಲ್ಪಿಸಿ ಅಂಗನವಾಡಿ ಕಾರ್ಯಕರ್ತೆಯರ, ಸಹಾಯಕಿಯರ ಮತ್ತು ಗುತ್ತಿಗೆ ಸಿಬ್ಬಂದಿಗಳ ವೇತನ ಗೌರವಧನವನ್ನು ಹಾಗೂ ಅಂಗನವಾಡಿಗೆ ಬಿಡುಗಡೆ ಮಾಡುವ ಅನುದಾನವನ್ನು ಸಹ ತಕ್ಷಣವೇ ಪಾವತಿ ಮಾಡಲು ಕ್ರಮ ತೆಗೆದುಕೊಳ್ಳುವ ಕುರಿತು.

** ** **

**ಉತ್ತರ**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಈ ಯೋಜನೆಯು 1975 ರಿಂದ ಜಾರಿಗೆ ಬಂದಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ 204 ಶಿಶು ಅಭಿವೃದ್ಧಿ ಯೋಜನೆಗಳ ಮೂಲಕ 66361 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತಿವೆ.

ರಾಜ್ಯದಲ್ಲಿ 66361 ಅಂಗನವಾಡಿ ಕಾರ್ಯಕರ್ತೆಯರು ಮತ್ತು 63531 ಅಂಗನವಾಡಿ ಸಹಾಯಕಿಯರು ಹುದ್ದೆಗಳು ಮಂಜೂರಾಗಿರುತ್ತದೆ. ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರ ನೀಡುತ್ತಿರುವ ಗೌರವಧನದ ವಿವರ ಈ ಕೆಳಕಂಡಂತಿದೆ:-

(ರೂ. ಲಕ್ಷಗಳಲ್ಲಿ)

| ವಿವರ | ವಿಂಗಡನೆ | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಗೌರವಧನ | ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ನೀಡುತ್ತಿರುವ ಗೌರವಧನ | ಒಟ್ಟು |
|---|---|---|---|---|
| ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 4500 | 6500 | 11000 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 6750 | 11250 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 7000 | 11500 |
| ಅಂಗನವಾಡಿ ಸಹಾಯಕಿ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 2500 | 3750 | 6250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 6500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 6750 |
| ಮಿನಿ ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 3500 | 3750 | 7250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 7500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 7750 |

**ಗೌರವಧನ ಪಾವತಿಸಲು ಇರುವ ಸಮಸ್ಯೆ:-**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಗೌರವಧನ ಹಾಗೂ ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮಗಳು ಕೇಂದ್ರ ಪುರಸ್ಕೃತ ಯೋಜನೆಯಾಗಿರುವುದರಿಂದ ಕಡ್ಡಾಯವಾಗಿ ಪಿ.ಎಫ್.ಎಂ.ಎಸ್. ತಂತ್ರಾಂಶದಲ್ಲಿಯೇ ಅನುಷ್ಠಾನಗೊಳಿಸುವಂತೆ ಸೂಚಿಸಲಾಗಿರುತ್ತದೆ.

ಆದರೆ 2022-23ನೇ ಸಾಲಿನ ಆಯವ್ಯಯ ಸಂಪುಟಗಳಲ್ಲಿ ಪ್ರಸ್ತಾಪಿತ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಅನುದಾನವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗೆ ಅನುಗುಣವಾಗಿ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ 2022-23ನೇ ಸಾಲಿನ ಪೂರಕ ಅಂದಾಜು-1ನೇ ಕಂತಿನಲ್ಲಿ ನಿಗದಿಪಡಿಸಿದ್ದು, ಸದರಿ ಮೊತ್ತವನ್ನು ವಿನಿಯೋಗಿಸಲು ಅನುವಾಗುವಂತೆ ಆರ್ಥಿಕ ಇಲಾಖೆಯು ದಿನಾಂಕ: 19-10-2022ರ ಪತ್ರದಲ್ಲಿ ಅನುಮತಿ ನೀಡಲಾಗಿರುತ್ತದೆ.

ಅದರಂತೆ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ ತಾಲ್ಲೂಕುವಾರು ಹೊಸ ಲೆಕ್ಕ ಶೀರ್ಷಿಕೆಯಡಿ ಪ್ರಸ್ತಾಪಿತ ಕಾರ್ಯಕ್ರಮಗಳಡಿ ಮರುಹಂಚಿಕೆ ಗೊಳಿಸಿ ಖಜಾನೆ-2 ತಂತ್ರಾಂಶದಲ್ಲಿ ಅಳವಡಿಸಿ ಬಿಡುಗಡೆಗೊಳಿಸಲು ವಿಳಂಬವಾಗಿರುತ್ತದೆ. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಗೌರವಧನ ಪಾವತಿಗೆ ಸಂಬಂಧಿಸಿದಂತೆ ಡಿಸೆಂಬರ್-2022ರ ಅಂತ್ಯದವರೆಗೆ ಅನುದಾನವನ್ನು ಬಿಡುಗಡೆ ಗೊಳಿಸಲಾಗಿರುತ್ತದೆ.

ಪ್ರಸ್ತುತ ರಾಜ್ಯದ್ಯಾಂತ 204 ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ ನವೆಂಬರ್ -22 ರ ಅಂತ್ಯಕ್ಕೆ ಪಾವತಿಸಲಾಗಿರುವ ಹಾಗೂ ಬಾಕಿ ಇರುವ ಗೌರವಧನದ ವಿವರ ಈ ಕೆಳಕಂಡಂತೆ ಪಾವತಿಸಲಾಗಿದೆ.

| ಕ್ರ. ಸಂ. | ಶಿಶು ಅಭಿವೃದ್ಧಿ ಯೋಜನೆಗಳ ಒಟ್ಟು ಸಂಖ್ಯೆ | ನವೆಂಬರ್-22ರ ಅಂತ್ಯದವರೆಗೆ ಗೌರವಧನ ಪಾವತಿ ವಿವರ | | | |
|---|---|---|---|---|---|
| | | ಅಂಗನವಾಡಿ ಕಾರ್ಯಕರ್ತೆ | | ಅಂಗನವಾಡಿ ಸಹಾಕಿಯರು | |
| | | ಪಾವತಿಸಿರುವ ಯೋಜನೆಗಳ ಸಂಖ್ಯೆ | ಬಾಕಿ | ಪಾವತಿಸಿರುವ ಯೋಜನೆಗಳ ಸಂಖ್ಯೆ | ಬಾಕಿ |
| 1 | 204 | 196 | 8 | 199 | 5 |

ಕೆಲವೊಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿನ ಅಧಿಕಾರಿಗಳ ವರ್ಗಾವಣೆ / ಮುಂಬಡ್ತಿ ಕಾರಣದಿಂದಾಗಿ ಖಜಾನೆ-2 ತಂತ್ರಾಂಶದಲ್ಲಿ ಡಿ.ಎಸ್.ಸಿ. ಕೀ ಮ್ಯಾಪಿಂಗ್ ನಿಂದಾಗಿ ಗೌರವಧನ ಪಾವತಿಸಲು ಕ್ರಮವಹಿಸಲಾಗಿದೆ.

**ಗುತ್ತಿಗೆ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ಪಾವತಿಸಲು ಇರುವ ಸಮಸ್ಯೆ :-**

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಆಧಾರದ ಸಿಬ್ಬಂದಿಗಳಿಗೆ ಡಿಸೆಂಬರ್-2022ರ ಅಂತ್ಯದರೆಗೆ ಅವಶ್ಯವಿರುವ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಬಾಹ್ಯ ಮೂಲದ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ರಾಜ್ಯ ಸರ್ಕಾರದ ವತಿಯಿಂದಲೇ ಕೇಂದ್ರ ಸರ್ಕಾರದ ಅನುದಾನ ಬಿಡುಗಡೆಯನ್ನು ನಿರೀಕ್ಷಿಸಿ ಜುಲೈ-2022ರ ಅಂತ್ಯದವರೆಗೆ ಬಿಡುಗಡೆಗೊಳಿಸಲಾಗಿದೆ. ಇನ್ನುಳಿದ ಅವಧಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ವತಿಯಿಂದ ಅನುದಾನ ಬಿಡುಗಡೆಯಾಗದೆ ಇರುವುದರಿಂದ ಸಿಬ್ಬಂದಿ ಗೌರವಧನವನ್ನು ಪಾವತಿಸಿರುವುದಿಲ್ಲ. ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ಕೂಡಲೇ ಬಾಕಿ ಇರುವ ಗೌರವಧನವನ್ನು ಪಾವತಿಸಲು ಕ್ರಮವಹಿಸಲಾಗುವುದು.

ಪೋಷಣ್ ಅಭಿಯಾನ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಆಧಾರದ ಸಿಬ್ಬಂದಿಗಳಿಗೆ ಜೂನ್-2022ವರೆಗೆ ಗೌರವಧನ ಪಾವತಿಸಲಾಗಿದೆ. ಜುಲೈ ಮತ್ತು ಆಗಸ್ಟ್ ಮಾಹೆಯ ಗೌರವಧನ ಪಾವತಿಸಲು ಅದೇಶ ಹೊರಡಿಸಲಾಗಿದೆ. ಉಳಿದಂತೆ ಸೆಪ್ಟೆಂಬರ್, ಅಕ್ಟೋಬರ್ ಮತ್ತು ನವಂಬರ್ ಮಾಹೆಗಳ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗಿದೆ.

**ಹಾಲು ಮೊಟ್ಟೆ ಹಣ ಪಾವತಿಸಲು ಇದ್ದ ಸಮಸ್ಯೆ:-**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮಗಳು ಕೇಂದ್ರ ಪುರಸ್ಕೃತ ಯೋಜನೆಯಾಗಿರುವುದರಿಂದ ಕಡ್ಡಾಯವಾಗಿ ಪಿ.ಎಫ್.ಎಂ.ಎಸ್. ತಂತ್ರಾಂಶದಲ್ಲಿಯೇ ಅನುಷ್ಠಾನಗೊಳಿಸುವಂತೆ ಸೂಚಿಸಲಾಗಿರುತ್ತದೆ.

ಆದರೆ 2022-23ನೇ ಸಾಲಿನ ಆಯವ್ಯಯ ಸಂಪುಟಗಳಲ್ಲಿ ಪ್ರಸ್ತಾಪಿತ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಅನುದಾನವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗೆ ಅನುಗುಣವಾಗಿ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ, ಇದರ ಜೊತೆಗೆ ರಾಜ್ಯ ಸರ್ಕಾರದ ಹೆಚ್ಚುವರಿ ಕಾರ್ಯಕ್ರಮಗಳಾದ ಕ್ಷೀರಭಾಗ್ಯ, ಸೃಷ್ಠಿ ಹಾಗೂ ಮಾತೃಪೂರ್ಣ ಯೋಜನೆಗಳಿಗೆ ಸಂಬಂಧಿಸಿದಂತೆ ಹೊಸ ಲೆಕ್ಕ ಶೀರ್ಷಿಕೆಯನ್ನು 2022-23ನೇ ಸಾಲಿನ ಪೂರಕ ಅಂದಾಜು-1ನೇ ಕಂತಿನಲ್ಲಿ ಒದಗಿಸಲಾಗಿರುತ್ತದೆ. ಹಾಗೂ ಹೊಸದಾಗಿ ಸೃಜಿಸಲಾಗಿರುವ ಲೆಕ್ಕ ಶೀರ್ಷಿಕೆಯಲ್ಲಿ ನಿಗದಿಪಡಿಸಲಾಗಿದ್ದ ಅನುದಾನವನ್ನು ವಿನಿಯೋಗಿಸಲು ಅನುವಾಗುವಂತೆ ಆರ್ಥಿಕ ಇಲಾಖೆಯು ದಿನಾಂಕ: 19-10-2022ರ ಪತ್ರದಲ್ಲಿ ಅನುಮತಿ ನೀಡಲಾಗಿರುತ್ತದೆ.

ಅದರಂತೆ ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನವನ್ನು ಪ್ರತ್ಯೇಕಿಸಿ ತಾಲ್ಲೂಕುವಾರು ಹೊಸ ಲೆಕ್ಕ ಶೀರ್ಷಿಕೆಯಡಿ ಪ್ರಸ್ತಾಪಿತ ಕಾರ್ಯಕ್ರಮಗಳಡಿ ಮರುಹಂಚಿಕೆಗೊಳಿಸಿ ಖಜಾನೆ-2 ತಂತ್ರಾಂಶದಲ್ಲಿ ಅಳವಡಿಸಿ ಬಿಡುಗಡೆಗೊಳಿಸಲು ವಿಳಂಬವಾಗಿರುತ್ತದೆ.

ಪ್ರಸ್ತುತ ಹೊಸದಾಗಿ ಸೃಜಿಸಿರುವ ಲೆಕ್ಕ ಶೀರ್ಷಿಕೆಯಡಿ ಕ್ಷೀರಭಾಗ್ಯ, ಸೃಷ್ಠಿ ಹಾಗೂ ಮಾತೃಪೂರ್ಣ ಯೋಜನೆಯ ಅನುಷ್ಠಾನಕ್ಕಾಗಿ ಸೆಪ್ಟೆಂಬರ್-22 ರಿಂದ ಡಿಸೆಂಬರ್-22 ರವರೆಗೆ ಅನುದಾನವನ್ನು ದಿನಾಂಕ: 08-12-2022ರಲ್ಲಿ ತಾಲ್ಲೂಕುಗಳಿಗೆ ಬಿಡುಗಡೆಗೊಳಿಸಲಾಗಿರುತ್ತದೆ.

ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರಿಗೆ 2 ಲೆಕ್ಕ ಶೀರ್ಷಿಕೆಗಳಡಿ ಕೇಂದ್ರ ಮತ್ತು ರಾಜ್ಯದ ಅನುದಾನವನ್ನು ಪ್ರತ್ಯೇಕವಾಗಿ ನಿಗದಿಪಡಿಸಿದ್ದಲ್ಲಿ ಏಕ ಕಾಲದಲ್ಲಿ ಗೌರವಧನವನ್ನು ಪಾವತಿಸಲು ಕಷ್ಟಸಾಧ್ಯವಾಗುವ ಹಿನ್ನೆಲೆಯಲ್ಲಿ, ಏಕ ಕಾಲದಲ್ಲಿ ಕೇಂದ್ರ ಮತ್ತು ರಾಜ್ಯದ ಪಾಲಿನ ಗೌರವಧವನ್ನು ಪಾವತಿಸಲು ಅನುವಾಗುವಂತೆ ಒಂದೇ ಲೆಕ್ಕ ಶೀರ್ಷಿಕೆಯಡಿ ಅನುದಾನವನ್ನು ಒದಗಿಸಲು 2022-23ನೇ ಸಾಲಿನ ಪೂರಕ ಅಂದಾಜು-1ನೇ ಕಂತಿನಲ್ಲಿ ಅವಕಾಶ ಕಲ್ಪಿಸಿದ್ದು, ಅದರಂತೆ ಸೆಪ್ಟೆಂಬರ್-22 ರಿಂದ ಡಿಸೆಂಬರ್-22ರ ವರೆಗೆ ಬಿಡುಗಡೆಗೊಳಿಸಲಾಗಿರುತ್ತದೆ.

ಈ ಮೇಲಿನಂತೆ ಕೇಂದ್ರ ಪುರಸ್ಕೃತ ಯೋಜನೆಗಳನ್ನು ಕಡ್ಡಾಯವಾಗಿ ಪಿ.ಎಫ್.ಎಂ.ಎಸ್. ಮೂಲಕ ಅನುಷ್ಠಾನಗೊಳಿಸಬೇಕಿದ್ದ ಕಾರಣದಿಂದಾಗಿ 2022-23ನೇ ಸಾಲಿನಲ್ಲಿ ಪೂರಕ ಅಂದಾಜು-1ನೇ ಕಂತಿನಲ್ಲಿ ಹೊಸ ಲೆಕ್ಕ ಶೀರ್ಷಿಕೆಗಳ ಸೃಜನೆ, ಕೇಂದ್ರ ಸರ್ಕಾರದಿಂದ ನಿಗದಿತ ಅವಧಿಯೊಳಗೆ ಅನುದಾನ ಬಿಡುಗಡೆಯಾಗದೆಯಿರುವ ಹಿನ್ನೆಲೆಯಲ್ಲಿ ಹಾಗೂ ಕೆಲವೊಂದು ತಾಂತ್ರಿಕ/ಆಡಳಿತಾತ್ಮಕ ಕಾರಣಗಳಿಂದಾಗಿ ಅನುದಾನ ಬಿಡುಗಡೆಗೊಳಿಸಲು ವಿಳಂಬವಾಗಿದ್ದು, ಮುಂದಿನ ದಿನಗಳಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮವಹಿಸಲಾಗುವುದು.

**ಸಂಖ್ಯೆ: ಮಮಇ 406 ಐಸಿಡಿ 2022**

Halappa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು

C106